ಉಪಸಭಾಪತಿ ಸ್ಥಾನಕ್ಕೆ ಪ್ರಾಣೇಶ್ | ಹೊರಟ್ಟಿಗೆ ಸಭಾಪತಿ ಸ್ಥಾನ?

# ಪರಿಷತ್‌ನಲ್ಲಿ ಜೆಡಿಎಸ್-ಬಿಜೆಪಿ ಮೈತ್ರಿ ಅಧಿಕೃತ

■ **ವಿಕ ಸುದ್ದಿಲೋಕ** ಬೆಂಗಳೂರು 28/1/21

ಜೆಡಿಎಸ್‌ಗೆ ಸಭಾಪತಿ ಸ್ಥಾನ ಬಿಟ್ಟುಕೊಡಲು ಸಿಎಂ ಬಿ.ಎಸ್.ಯಡಿಯೂರಪ್ಪ ಸಮ್ಮತಿ ಸೂಚಿಸಿದ್ದಾರೆ. ಜತೆಗೆ ಉಪಸಭಾಪತಿ ಸ್ಥಾನಕ್ಕೆ ಬಿಜೆಪಿಯಿಂದ ಎಂ.ಕೆ.ಪ್ರಾಣೇಶ್ ಅವರನ್ನು ಕಣಕ್ಕಿಳಿಸಲು ನಿರ್ಧರಿಸಲಾಗಿದೆ. ಇದರೊಂದಿಗೆ ಬಿಜೆಪಿ-ಜೆಡಿಎಸ್ ನಡುವೆ ಮತ್ತೊಂದು ಸುತ್ತಿನ ಮೈತ್ರಿಗೆ ವೇದಿಕೆ ಸಜ್ಜಾದಂತಾಗಿದೆ.

ಸಭಾಪತಿ ಹುದ್ದೆಗೆ ಸಂಬಂಧಿಸಿ ಕಾಂಗ್ರೆಸ್‌ಗೆ ನೀಡಿದ್ದ ಬೆಂಬಲವನ್ನು ಜೆಡಿಎಸ್ ಅಧಿಕೃತವಾಗಿ ಹಿಂಪಡೆದಿದೆ. ಹಾಗಾಗಿ ಸಭಾಪತಿ ಸ್ಥಾನಕ್ಕೆ ಪ್ರತಾಪ್‌ಚಂದ್ರ ಶೆಟ್ಟಿ ರಾಜೀನಾಮೆ ಸಲ್ಲಿಸುವುದು ಬಹುತೇಕ ಖಚಿತವಾಗಿದೆ. ಇದರ ಮಧ್ಯೆ ಉಪಸಭಾಪತಿ ಆಯ್ಕೆಗೆ ಚುನಾವಣೆ ಘೋಷಣೆಯಾಗಿದೆ. ಈ ಹಿನ್ನೆಲೆಯಲ್ಲಿ ಪರಿಷತ್ ಸದಸ್ಯರೊಂದಿಗೆ ಸಿಎಂ ಬಿಎಸ್‌ವೈ ಬುಧವಾರ ಸಂಜೆ ಸಭೆ ನಡೆಸಿದರು.

ಪರಿಷತ್‌ನಲ್ಲಿ ಬಿಜೆಪಿಗೆ ಬೆಂಬಲಿಸುವ ಸಂಬಂಧ ಜೆಡಿಎಸ್ ವರಿಷ್ಠರು ಮಂಗಳವಾರವೇ ನಿರ್ಧಾರ ಕೈಗೊಂಡು, ಹೊರಟ್ಟಿ ಅವರನ್ನು ಸಭಾಪತಿ ಮಾಡಲು ಬಿಜೆಪಿಗೆ ಒತ್ತಾಯಿಸಲು ನಿರ್ಧರಿಸಲಾಗಿತ್ತು. ಅದರಂತೆ ಹೊರಟ್ಟಿ ನೇತೃತ್ವದ ಜೆಡಿಎಸ್ ಸದಸ್ಯರ ನಿಯೋಗವು ಬುಧವಾರ ಬೆಳಗ್ಗೆ ಸಿಎಂ ಭೇಟಿಯಾಗಿ ಈ ಸಂಬಂಧ ಆಗ್ರಹ ಮಾಡಿತು. ಸಿಎಂ ಸಕಾರಾತ್ಮಕವಾಗಿ ಸ್ಪಂದಿಸಿದ್ದರು.

ನಂತರ ಸಂಜೆ ವೇಳೆಗೆ ಬಿಜೆಪಿ ಸದಸ್ಯರನ್ನು ಕರೆಸಿಕೊಂಡು ಸಿಎಂ ಸಭೆ ನಡೆಸಿದರು. ಸದಸ್ಯರಾದ ಮಹಾಂತೇಶ ಕವಟಗಿಮಠ, ಶಶಿಲ್ ನಮೋಶಿ, ಆಯನೂರು ಮಂಜುನಾಥ್ ಮತ್ತಿತರ ಹಿರಿಯರ ಹೆಸರು ಉಪ ಸಭಾಪತಿ ಸ್ಥಾನಕ್ಕೆ ಕೇಳಿ ಬಂದಿತ್ತು. ಆದರೆ, ಜಾತಿ ಹಾಗೂ ಪ್ರಾದೇಶಿಕ ಸಮತೋಲನದ ದೃಷ್ಟಿಯಿಂದ ಪ್ರಾಣೇಶ್ ಅವರಿಗೆ ಅವಕಾಶ ನೀಡಲು ತೀರ್ಮಾನಿಸಲಾಯಿತು. ಲಿಂಗಾಯತ ಸಮುದಾಯದ ಹೊರಟ್ಟಿ ಸಭಾಪತಿಯಾದರೆ ಅದೇ ಸಮುದಾಯದವರು ಉಪ ಸಭಾಪತಿಯಾಗುವುದು ಸೂಕ್ತವಲ್ಲ ಎಂಬ ನಿಲುವು ತಳೆಯಲಾಯಿತು. ಹಾಗಾಗಿ ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚಿಕ್ಕಮಗಳೂರು ಜಿಲ್ಲೆಯಿಂದ ಒಕ್ಕಲಿಗ ಸಮಾಜದ ಎಂ. ಕೆ.ಪ್ರಾಣೇಶ್ ಅವರನ್ನು ಆಯ್ಕೆ ಮಾಡಲು ಸಹಮತ ವ್ಯಕ್ತಪಡಿಸಲಾಯಿತು. ಇತ್ತೀಚೆಗೆ ನಿಧನರಾಗಿರುವ ನಿಕಟಪೂರ್ವ ಉಪ ಸಭಾಪತಿ ಧರ್ಮೇಗೌಡ ಅವರೂ ಚಿಕ್ಕಮಗಳೂರು ಜಿಲ್ಲೆಯವರಾಗಿದ್ದರು. ಜತೆಗೆ ಒಕ್ಕಲಿಗ ಸಮುದಾಯಕ್ಕೆ ಸೇರಿದವರಾಗಿದ್ದರು.





**ಪರಿಷತ್‌ನಲ್ಲಿ ಬಲಾಬಲ**

| | |
|---|---|
| ಬಿಜೆಪಿ | 31 |
| ಕಾಂಗ್ರೆಸ್ | 28 |
| ಜೆಡಿಎಸ್ | 13 |
| ಪಕ್ಷೇತರ | 01 |
| ಖಾಲಿ | 01 |

### ಹೊರಟ್ಟಿಗೆ ಈ ಬಾರಿ ಅದೃಷ್ಟ

ಕಾಂಗ್ರೆಸ್-ಜೆಡಿಎಸ್ ಸಮ್ಮಿಶ್ರ ಸರಕಾರದ ಅವಧಿಯಲ್ಲೇ ಸಭಾಪತಿ ಸ್ಥಾನಕ್ಕೆ ಬಸವರಾಜ ಹೊರಟ್ಟಿ ಹೆಸರು ಕೇಳಿ ಬಂದಿತ್ತು. ಆದರೆ, ಕಡೆ ಕ್ಷಣದಲ್ಲಿ ಕಾಂಗ್ರೆಸ್‌ನ ಕೆ.ಪ್ರತಾಪ್‌ಚಂದ್ರ ಶೆಟ್ಟಿ ಅವರನ್ನು ಆಯ್ಕೆ ಮಾಡಲಾಗಿತ್ತು. ಇದೀಗ ಜೆಡಿಎಸ್‌ಗೆ ಸಭಾಪತಿ ಸ್ಥಾನ ಬಿಟ್ಟುಕೊಡಲು ಬಿಜೆಪಿ ನಿರ್ಧರಿಸಿದ್ದರಿಂದ ಹೊರಟ್ಟಿ ಅವರೇ ಈ ಸ್ಥಾನಕ್ಕೆ ಆಯ್ಕೆಯಾಗುವುದು ಬಹುತೇಕ ಖಚಿತವಾಗಿದೆ. ಉಪ ಸಭಾಪತಿ ಆಯ್ಕೆ ಬಳಿಕ ಹಾಲಿ ಸಭಾಪತಿ ಪ್ರತಾಪಚಂದ್ರ ಶೆಟ್ಟಿ ಈ ಸ್ಥಾನ ತೊರೆಯುವ ನಿರೀಕ್ಷೆಯಿದೆ. ಅದಾದ ಬಳಿಕ ನೂತನ ಸಭಾಪತಿ ಆಯ್ಕೆ ಪ್ರಕ್ರಿಯೆ ಪ್ರಾರಂಭವಾಗಲಿದೆ.



ಸಿಎಂ ಯಡಿಯೂರಪ್ಪ ಅವರು ಪರಿಷತ್‌ನ ಬಿಜೆಪಿ ಸದಸ್ಯರ ಜತೆ ಬುಧವಾರ ಸಭೆ ನಡೆಸಿದರು.

### ಪ್ರಾಣೇಶ್ ಇಂದು ನಾಮಪತ್ರ ಸಲ್ಲಿಕೆ

ಉಪ ಸಭಾಪತಿ ಸ್ಥಾನಕ್ಕೆ ಸ್ಪರ್ಧಿಸಲು ಬಿಜೆಪಿಯಿಂದ ನಿಯೋಜಿತರಾಗಿವ ವಿಧಾನ ಪರಿಷತ್ ಸದಸ್ಯ ಎಂ.ಕೆ.ಪ್ರಾಣೇಶ್, ಗುರುವಾರ ಬೆಳಗ್ಗೆ 11 ಗಂಟೆಗೆ ನಾಮಪತ್ರ ಸಲ್ಲಿಸಲಿದ್ದಾರೆ.